ಸಾಕ್ಷಿಗೆ ಪ್ರಮಾಣ ವಚನವನ್ನು ದಿಃ23-07-2025 ರಂದು ಬೋಧಿಸಲಾಯಿತು.

ಮುಂದುವರೆದ ಮುಖ್ಯ ವಿಚಾರಣೆಃ ವಾದಿ ಪರ ಶ್ರೀ ಆರ್ ಎಸ್ ಜೆ ವಕೀಲರಿಂದಃ

ನಾನು ಈ ದಾವೆಯಲ್ಲಿ ವಾದಿ ಇದ್ದು, ನನ್ನ ಮುಂದುವರೆದ ಮುಖ್ಯ ವಿಚಾರಣೆಯನ್ನು ಪ್ರಮಾಣ ಪತ್ರದ ಮೂಲಕ ಸಲ್ಲಿಸಿದ್ದು ಸದರಿ ಪ್ರಮಾಣ ಪತ್ರದಲ್ಲಿರುವ ಎಲ್ಲಾ ಸಂಗತಿಗಳು ನನಗೆ ಗೊತ್ತಿದ್ದು ಅದರಲ್ಲಿರುವ ಸಹಿ ನನ್ನದೇ ಆಗಿರುತ್ತದೆ. ಮತ್ತು ಪ್ರಮಾಣಪತ್ರದಲ್ಲಿರುವ ವಿಷಯಗಳು ನಾನೇ ಹೇಳಿ ಬರೆಸಿರುತ್ತೇನೆ. ಈ ಪ್ರಮಾಣ ಪತ್ರವನ್ನು ಮುಖ್ಯ ವಿಚಾರಣೆಯ ಭಾಗವಾಗಿ ಪರಿಗಣಿಸಲು ಹಾಜರುಪಡಿಸಿರುತ್ತೇನೆ.

ದಾವಾಸ್ತಿಗೆ ಸಂಬಂಧಿಸಿದಂತೆ ಹೊಸುರ ಗ್ರಾಮ ಸರ್ವೆ ನಂ 49/ಅ1/ಅ1 ಕ್ಕೆ ಸಂಬಂಧಿಸಿದಂತೆ 2021-2022 ನೇ ಸಾಲಿನ ಪಹಣಿ ಪತ್ರಿಕೆಯನ್ನು ಹಾಜರುಪಡಿಸಿದ್ದು ಅದನ್ನು ನಿ.ಪಿ-1 ಎಂದು, ದಾವಾದ ಒಂದನೇ ಆಸ್ತಿಗೆ ಸಂಬಂಧಿಸಿದಂತೆ ದಿಃ 12-09-2017 ರ original sale deed ನ್ನು ಹಾಜರುಪಡಿಸಿದ್ದು ಅದನ್ನು ನಿ.ಪಿ-2 ಎಂದು, ದಾವಾದ ಎರಡನೇ ಆಸ್ತಿಗೆ ಸಂಬಂಧಿಸಿದಂತೆ KHB ರವರು ನೀಡಿರುವ layout ನ ದೃಢಿಕೃತ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿ.ಪಿ-3 ಎಂದು, ದಾವಾದ ಎರಡನೇ ಆಸ್ತಿಗೆ ಸಂಬಂಧಿಸಿದಂತೆ ದಿಃ 12-09-2017 ರ original sale deed ನ್ನು ಹಾಜರುಪಡಿಸಿದ್ದು ಅದನ್ನು ನಿ.ಪಿ-4 ಎಂದು, ದಾವಾದ ಒಂದನೇ ಆಸ್ತಿಗೆ ಸಂಬಂಧಿಸಿದಂತೆ KHB ರವರು ನೀಡಿರುವ layout ನ ದೃಢಿಕೃತ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿ.ಪಿ-5 ಎಂದು, ದಿಃ 03-11-2017 ರಂದು KHB ರವರು ಮುಖ್ಯ ಅಧಿಕಾರಿ ಸಿದ್ದಾಪುರ ಪುರಸಭೆ ರವರಿಗೆ ನೀಡಿರುವ ಅರ್ಜಿಯ ದೃಢಿಕೃತ ನಕಲನ್ನು ಹಾಜರುಪಡಿಸಿದ್ದು ಅದನ್ನು ನಿ.ಪಿ-6 ಎಂದು, ದಾವಾಸ್ತಿ ಸೈಟ್ ನಂ 3 ಮತ್ತು 6 ಸಂಬಂಧಿಸಿದಂತೆ KHB ರವರು ನೀಡಿರುವ layout ನ ದೃಢಿಕೃತ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿ.ಪಿ-7 ಎಂದು ಗುರುತಿಸಲಾಯಿತು.

ದಾವೆಯಲ್ಲಿ ಕೇಳಿದಂತೆ ಡಿಕ್ರಿ ಮಾಡಬೇಕೇಂದು ಕೊರುತ್ತೆನೆ.



ಈ ಹಂತದಲ್ಲಿ ಪಾಟೀಸವಾಲಿಗೆ ಸಮಯವನ್ನು ಕೋರಿದ್ದರಿಂದ ಕಾಲಾವಕಾಶ ನೀಡಿ ಮುಂದೂಡಲಾಯಿತು.

(ನನ್ನ ಹೇಳಿಕೆ ಪ್ರಕಾರ ತೆರೆದ  ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಿಸಲಾಯಿತು.)

**ಓ.ಹೇ.ಕೇ. ಸರಿ ಇದೆ,**

**ಸಹಿ ಇದೆ**

**ಸಿವಿಲ್ ನ್ಯಾಯಾಧೀಶರು ಸಿದ್ದಾಪುರ**